# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಭ್ರಷ್ಟಾಚಾರ ನಿಗ್ರಹ ದಳವನ್ನು ಸೃಜಿಸಿರುವ ಆದೇಶವನ್ನು ಮಾನ್ಯ ಉಚ್ಚ ನ್ಯಾಯಾಲಯದ ದಿನಾಂಕ:11.08.2022ರ ತೀರ್ಪಿನನ್ವಯ ರದ್ದುಪಡಿಸುವ ಬಗ್ಗೆ.

****

**ಓದಲಾಗಿದೆ:**

1) ಸರ್ಕಾರದ ಆದೇಶ ಸಂಖ್ಯೆ.ಸಿಆಸುಇ 14 ಸೇಲೋಯು 2016, ದಿನಾಂಕ 14.03.2016.
2) ಸರ್ಕಾರದ ಅಧಿಸೂಚನೆ ಸಂಖ್ಯೆ.ಹೆಚ್‌ಡಿ 71 ಪೊಸಿಪ(i) 2016, ದಿನಾಂಕ:19.03.2016.
3) ಸರ್ಕಾರದ ಅಧಿಸೂಚನೆ ಸಂಖ್ಯೆ.ಹೆಚ್‌ಡಿ 71 ಪೊಸಿಪ(ii) 2016, ದಿನಾಂಕ:19.03.2016.
4) ಸರ್ಕಾರದ ಅಧಿಸೂಚನೆ ಸಂಖ್ಯೆ.ಹೆಚ್‌ಡಿ 71 ಪೊಸಿಪ(iii) 2016, ದಿನಾಂಕ:19.03.2016.
5) ಸರ್ಕಾರದ ಅಧಿಸೂಚನೆ ಸಂಖ್ಯೆ.ಹೆಚ್‌ಡಿ 71 ಪೊಸಿಪ (iv) 2016, ದಿನಾಂಕ:19.03.2016.
6) ಸರ್ಕಾರದ ಅಧಿಸೂಚನೆ ಸಂಖ್ಯೆ.ಹೆಚ್‌ಡಿ 71 ಪೊಸಿಪ 2016, ದಿನಾಂಕ:30.03.2016
7) ಸರ್ಕಾರದ ಅಧಿಸೂಚನೆ ಸಂಖ್ಯೆ.ಹೆಚ್‌ಡಿ 71 ಪೊಸಿಪ 2016, ದಿನಾಂಕ:21.04.2016.
8) ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ.19386/2016ರಲ್ಲಿ ದಿನಾಂಕ:11.08.2022ರಂದು ನೀಡಿರುವ ತೀರ್ಪು.

**ಪ್ರಸ್ತಾವನೆ**

ಮೇಲೆ ಕ್ರಮ ಸಂಖ್ಯೆ(1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಭ್ರಷ್ಟಾಚಾರ ತಡೆ ಅಧಿನಿಯಮ, 1988ನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವ ಸಲುವಾಗಿ ಹಾಗೂ ಪ್ರಕರಣಗಳನ್ನು ಸ್ವತಂತ್ರವಾಗಿ ತನಿಖೆ ಮಾಡಲು ವಿವಿಧ ವೃಂದದ ಹುದ್ದೆಗಳೊಂದಿಗೆ ಒಂದು ಪ್ರತ್ಯೇಕ ಭ್ರಷ್ಟಾಚಾರ ನಿಗ್ರಹ ದಳವನ್ನು (Anti Corruption Bureau) ಸೃಜಿಸಲಾಗಿತ್ತು.

ಮೇಲೆ ಕ್ರಮ ಸಂಖ್ಯೆ.(2)ರಲ್ಲಿ ಓದಲಾದ ಸರ್ಕಾರದ ಅಧಿಸೂಚನೆ ದಿನಾಂಕ:19.03.2016ರಲ್ಲಿ ಭ್ರಷ್ಟಾಚಾರ ತಡೆ ಅಧಿನಿಯಮ 1988ರ ಕಲಂ 17ರಡಿ ಹಾಗೂ ಸಾಮಾನ್ಯ ಖಂಡಗಳ ಅಧಿನಿಯಮ 1897ರ ಕಲಂ 21ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸರ್ಕಾರದ ಅಧಿಸೂಚನೆ ಸಂಖ್ಯೆ.ಹೆಚ್‌ಡಿ 286 ಪಿಇಜಿ 90, ದಿನಾಂಕ:06.02.1991ನ್ನು ರದ್ದುಪಡಿಸಿ ಆದೇಶಿಸಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ.(3)ರಲ್ಲಿ ಓದಲಾದ ಸರ್ಕಾರದ ಅಧಿಸೂಚನೆ ದಿನಾಂಕ:19.03.2016ರಲ್ಲಿ ದಂಡ ಪ್ರಕ್ರಿಯಾ ಸಂಹಿತೆ 1973 ಉಪಬಂಧ 2(ಎಸ್)ರಡಿ ಹಾಗೂ ಸಾಮಾನ್ಯ ಖಂಡಗಳ ಅಧಿನಿಯಮ 1897ರ ಕಲಂ 21ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸರ್ಕಾರದ ಅಧಿಸೂಚನೆ ಸಂಖ್ಯೆ.ಹೆಚ್‌ಡಿ 292 ಪಿಇಜಿ 2000, ದಿನಾಂಕ:08.05.2002 ಹಾಗೂ ಅಧಿಸೂಚನೆ ಸಂಖ್ಯೆ.ಹೆಚ್‌ಡಿ 334 ಪಿಇಜಿ 2002, ದಿನಾಂಕ:05.12.2002ಗಳನ್ನು ರದ್ದುಪಡಿಸಿ ಆದೇಶಿಸಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ.(4)ರಲ್ಲಿ ಓದಲಾದ ಸರ್ಕಾರದ ಅಧಿಸೂಚನೆ ದಿನಾಂಕ:19.03.2016ರಲ್ಲಿ ಭ್ರಷ್ಟಾಚಾರ ತಡೆ ಅಧಿನಿಯಮ 1988ರ ಕಲಂ 17ರ ಉಪಬಂಧ(ಸಿ)ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಭ್ರಷ್ಟಾಚಾರ ನಿಗ್ರಹ ದಳದ ಎಲ್ಲಾ ಪೊಲೀಸ್ ಉಪಾಧೀಕ್ಷಕರುಗಳಿಗೆ ತನಿಖಾಧಿಕಾರ ನೀಡಿ ಅಧೀಕರಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ.(5)ರಲ್ಲಿ ಓದಲಾದ ಸರ್ಕಾರದ ಅಧಿಸೂಚನೆ ದಿನಾಂಕ:19.03.2016ರಲ್ಲಿ ದಂಡ ಪ್ರಕ್ರಿಯಾ ಸಂಹಿತೆ 1973 ಉಪಬಂಧ 2(ಎಸ್)ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಭ್ರಷ್ಟಾಚಾರ ನಿಗ್ರಹ ದಳದ ಅಪರ ಪೊಲೀಸ್ ಮಹಾನಿರ್ದೇಶಕರ ಕಛೇರಿಯನ್ನು ಪೊಲೀಸ್ ಠಾಣೆಯೆಂದು ಘೋಷಿಸಿ ರಾಜ್ಯವ್ಯಾಪ್ತಿ ನೀಡಿ ಆದೇಶಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ.(6)ರಲ್ಲಿ ಓದಲಾದ ಸರ್ಕಾರದ ಅಧಿಸೂಚನೆ ದಿನಾಂಕ:30.03.2016ರಲ್ಲಿ ದಂಡ ಪ್ರಕ್ರಿಯಾ ಸಂಹಿತೆ 1973 ಉಪಬಂಧ 2(ಎಸ್)ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಸದರಿ ಅಧಿಸೂಚನೆಯಲ್ಲಿ ಪಟ್ಟಿ ಮಾಡಿರುವ ಜಿಲ್ಲೆಗಳ ಪೊಲೀಸ್ ಠಾಣೆಗಳನ್ನು ಸ್ಥಳೀಯ ಪೊಲೀಸ್ ಠಾಣಾ ವ್ಯಾಪ್ತಿಯೂ ಸೇರಿದಂತೆ ಭ್ರಷ್ಟಾಚಾರ ನಿಗ್ರಹ ದಳದ ಪೊಲೀಸ್ ಠಾಣೆಗಳೆಂದು ಘೋಷಿಸಿ ಆದೇಶಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ.(7)ರಲ್ಲಿ ಓದಲಾದ ಸರ್ಕಾರದ ಅಧಿಸೂಚನೆ ದಿನಾಂಕ:21.04.2016ರಲ್ಲಿ ಭ್ರಷ್ಟಾಚಾರ ತಡೆ ಅಧಿನಿಯಮ 1988ರ ಕಲಂ 17ರ ಉಪಬಂಧ(ಸಿ)ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಭ್ರಷ್ಟಾಚಾರ ನಿಗ್ರಹ

ದಳದ ಎಲ್ಲಾ ಪೊಲೀಸ್ ಇನ್‌ಸ್‌ಪೆಕ್ಟರ್‌ಗಳಿಗೆ ತನಿಖಾಧಿಕಾರವನ್ನು ನೀಡಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (8)ರಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ:11.08.2022ರಂದು ರಿಟ್ ಅರ್ಜಿ ಸಂಖ್ಯೆ.19386/2016ರಲ್ಲಿ ನೀಡಿರುವ ತೀರ್ಪಿನ ಕೆಲವು ಪ್ರಮುಖ ಅಂಶಗಳು ಈ ಕೆಳಕಂಡಂತಿವೆ:

2) The impugned Government order No.DPAR 14 SELOYU 2016, Bengaluru dated 14.3.2016 creating ACB, is hereby **quashed.**

**3**) the impugned notifications-

(a) No.HD 71 PoSiPa(i) 2016, Bengaluru, dated 19.3.2016
(b) No.HD 71 PoSiPa(ii) 2016, Bengaluru, dated 19.3.2016
(c) No.HD 71 PoSiPa(iii) 2016, Bengaluru, dated 19.3.2016
(d) No.HD 71 PoSiPa(iv) 2016, Bengaluru, dated 19.3.2016
issued by the State Government superseding the earlier notification dated 6.2.1991, 8.5.2002 and 5.12.2002 are hereby quashed. All subsequent notifications issued pursuant to the Government order dated 14.03.2016 for the purpose of formation and working of Anti Corruption Bureau, are also hereby quashed.

4) The notification dated 6.2.1991, 8.5.2002 and 5.12.2002 that authorized the Lokayukta Police with powers to investigate under the provisions of Prevention of Corruption Act, 1988 and had declared the offices of Police Wing of Lokayukta as Police Stations under Section 2(s) of the Code of Criminal Procedure, are hereby restored.

5)

(a) W.P.No.16222/2017 filed by Mr. K.T.Nagaraja;
(b) W.P.16223/2017 by Mr. Kale Gowda;

(c) W.P.No.16697/2017 by Sidharth Bhupal Shingadi
(d) W.P.No.16703/2017 by Mr. Basavaraju and others;
(e) W.P.No.16862/2017 by Mr.Deepak Kumar H.R.;
(f) W.P.No.28341/2017 by Mr.Channabasavaradhya;
(g) W.P.108010/2017 by Mr.Prakash Hasaraddi;
(h) W.P.No.108689/2017 by Mr.Basavaraj @ Sachin;
(i) W.P.No.108690/2017 by Mr.Shankar Ramachandra Ambure;
(j) W.P.22851/2018 by Mr.Hemesha S.M.;
(k) W.P. No.9147/2019 by Mr.T.N.Rangaswamy; and
(l) W.P.No.18042/2019 by Mr.K.C.Yathish Kumar

which are filed in personal interest are accordingly disposed off, in view of quashing of the Government order dated 14.03.2016 in PILs stated supra.

6) Since this Court quashed the impugned Government order dated 14.03.2016 and the impugned Government Notification dated 19.3.2016, the Anti Corruption Bureau is **abolished**. But all inquiries/investigations and other disciplinary proceedings pending before the ACB will get transferred to the Lokayukta. However, all inquiries, investigations, disciplinary proceedings, orders of convictions/acquittals and all other proceedings held by ACB till today, are hereby saved and the Police Wing of Karnataka Lokayukta shall proceed from the stage at which they are pending as on today, in accordance with law.

7) Consequently, the proceedings in respect of some of the private petitioners which are pending before the ACB, will get transferred to the Lokayukta and the said petitioners cannot escape from the clutches of law and they have to face the proceedings before the Police Wing of the Karnataka Lokayukta, who shall proceed in accordance with law.

ಮಾನ್ಯ ಉಚ್ಚ ನ್ಯಾಯಾಲಯವು ನೀಡಿರುವ ತೀರ್ಪಿನಲ್ಲಿನ ಅಂಶಗಳನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ.ಸಿಆಸುಇ 76 ಸೇಲೋಯು 2016(ಭಾ-2), ಬೆಂಗಳೂರು, ದಿನಾಂಕ:09.09.2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ.19386/2016 ಪ್ರಕರಣದಲ್ಲಿ ದಿನಾಂಕ:11.08.2022ರಂದು ನೀಡಿರುವ ತೀರ್ಪಿನ ಅನುಷ್ಠಾನದ ಸಂಬಂಧ ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

1. ದಿನಾಂಕ:11.08.2022ರಂದು ಮಾನ್ಯ ಉಚ್ಚ ನ್ಯಾಯಾಲಯವು ನೀಡಿರುವ ತೀರ್ಪಿನಲ್ಲಿ ಭ್ರಷ್ಟಾಚಾರ ನಿಗ್ರಹ ದಳವನ್ನು ರದ್ದುಗೊಳಿಸಿರುವ ಆದೇಶವನ್ನು ಅನುಷ್ಠಾನಗೊಳಿಸಿದೆ.

2. ಭ್ರಷ್ಟಾಚಾರ ನಿಗ್ರಹ ದಳದ ಅಧಿಕಾರವನ್ನು ರದ್ದುಗೊಳಿಸಿ ಮಾನ್ಯ ಉಚ್ಚ ನ್ಯಾಯಾಲಯದಿಂದ ಹೊರಡಿಸಲಾದ ಆದೇಶದಿಂದಾಗಿ ಹೊರಹೊಮ್ಮಿರುವ ತತ್ಪರಿಣಾಮಗಳನ್ನು ಅನುಷ್ಠಾನಗೊಳಿಸಿದೆ.

3. ಮಾನ್ಯ ಉಚ್ಚ ನ್ಯಾಯಾಲಯದ ಆದೇಶದನ್ವಯ ಸರ್ಕಾರದ ಅಧಿಸೂಚನೆ ದಿನಾಂಕ:06.02.1991, 08.05.2002 ಹಾಗೂ 05.12.2002ರಲ್ಲಿ ಕರ್ನಾಟಕ ಲೋಕಾಯುಕ್ತ ಪೊಲೀಸ್ ವಿಭಾಗಕ್ಕೆ ಭ್ರಷ್ಟಾಚಾರ ತಡೆ ಅಧಿನಿಯಮ 1988ರ ಉಪಬಂಧಗಳಡಿ ನೀಡಲಾಗಿದ್ದ ತನಿಖಾಧಿಕಾರವನ್ನು ಹಾಗೂ ದಂಡ ಪ್ರಕ್ರಿಯಾ ಸಂಹಿತೆ 1973ರ

ಉಪಬಂಧ 2(ಎಸ್)ರನ್ವಯ ಕರ್ನಾಟಕ ಲೋಕಾಯುಕ್ತ ಪೊಲೀಸ್ ವಿಭಾಗಕ್ಕೆ ಪೊಲೀಸ್ ಠಾಣಾಧಿಕಾರವನ್ನು ನೀಡಿ ಆದೇಶಿಸಿದ್ದ ಸರ್ಕಾರದ ಅಧಿಸೂಚನೆಗಳನ್ನು ಪುನರುಜ್ಜೀವನಗೊಳಿಸಿ ಆದೇಶಿಸಿದೆ.

4. ಭ್ರಷ್ಟಾಚಾರ ನಿಗ್ರಹ ದಳವನ್ನು ರದ್ದುಗೊಳಿಸಿರುವುದರಿಂದ ಹಾಗೂ ದಿನಾಂಕ:19.03.2016, 30.03.2016 ಹಾಗೂ 21.04.2016ರ ಸರ್ಕಾರದ ಅಧಿಸೂಚನೆಗಳಲ್ಲಿ ಭ್ರಷ್ಟಾಚಾರ ನಿಗ್ರಹ ದಳಕ್ಕೆ ನೀಡಲಾಗಿದ್ದ ತನಿಖಾಧಿಕಾರ/ಪೊಲೀಸ್ ಠಾಣೆಗಳೆಂದು ಘೋಷಿಸಿ/ ರಾಜ್ಯವ್ಯಾಪ್ತಿ ಅಧಿಕಾರ ನೀಡಿರುವ ಆದೇಶಗಳನ್ನು ಹಿಂಪಡೆದಿರುವುದರಿಂದ ಭ್ರಷ್ಟಾಚಾರ ನಿಗ್ರಹ ದಳದಲ್ಲಿ ಪ್ರಸ್ತುತ ಬಾಕಿಯಿರುವ ತನಿಖೆಗಳು/ವಿಚಾರಣೆಗಳು/ಇತರೆ ಶಿಸ್ತು ಪ್ರಕರಣಗಳು ಹಾಗೂ ಖಾಸಗಿ ದೂರುದಾರರ ಪ್ರಕರಣಗಳನ್ನು ಸಂಪೂರ್ಣವಾಗಿ ಲೋಕಾಯುಕ್ತ ಸಂಸ್ಥೆಗೆ ವರ್ಗಾಯಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

9/9/2022

(ಆಂಜನಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಆಸುಇ (ಜಾಗೃತ ವಿಭಾಗ).

**ಇವರಿಗೆ:**
**ಸಂಕಲನಕಾರರು, ಇ-ರಾಜ್ಯಪತ್ರ, ಇ-ಗೆಜೆಟ್‌ನಲ್ಲಿ ಪ್ರಕಟಿಸಲು.**

**ಪ್ರತಿಗಳು:**

1) ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು.-560001.
2) ಪ್ರಧಾನ ಮಹಾಲೇಖಪಾಲರು (ಇ&ಆರ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
3) ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560001.
4) ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
5) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ಅಭಿವೃದ್ಧಿ ಆಯುಕ್ತರು.

6) ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು /ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
7) ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
8) ರಾಜ್ಯಪಾಲರ ವಿಶೇಷ ಕಾರ್ಯದರ್ಶಿ, ರಾಜಭವನ, ಬೆಂಗಳೂರು.
9) ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಕರ್ನಾಟಕ ವಿಧಾನ ಪರಿಷತ್ತು, ಬೆಂಗಳೂರು.
10) ಎಲ್ಲಾ ಇಲಾಖಾ ಮುಖ್ಯಸ್ಥರು.
11) ಎಲ್ಲಾ ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು.
12) ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
13) ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
14) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
15) ಅಪರ ಪೊಲೀಸ್ ಮಹಾನಿರ್ದೇಶಕರು, ಭ್ರಷ್ಟಾಚಾರ ನಿಗ್ರಹ ದಳ, ಖನಿಜಭವನ, ಬೆಂಗಳೂರು.
16) ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
17) ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು/ ಶಾಖಾಧಿಕಾರಿಗಳು.
18) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ-12).
19) ಸಚಿವ ಸಂಪುಟ ಶಾಖೆ, ವಿಧಾನಸೌಧ, ಬೆಂಗಳೂರು.
20) ಹೆಚ್ಚುವರಿ ಪ್ರತಿಗಳು/ಶಾಖಾ ರಕ್ಷಾ ಕಡತ.